All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

24.09.2026 19.35 hrs

<><><><>

ಮುಖ್ಯಾಂಶಗಳು

- ಬದಲಾಗುತ್ತಿರುವ ಯುದ್ಧದ ಸ್ವರೂಪಕ್ಕೆ ದೇಶದ ರಕ್ಷಣಾ ವ್ಯವಸ್ಥೆ ಹೊಂದಿಕೊಳ್ಳುವುದು ಅಗತ್ಯ - ಭಾರತೀಯ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಎ.ಎಸ್.ರಾಜಸುಬ್ರಮಣಿ
- ಮೊಬೈಲ್ ಫೋನ್ ಬೇಡಿಕೆಯ ಶೇಕಡ ೯೯.೨ ರಷ್ಟು ಭಾರತದಲ್ಲೇ ಉತ್ಪಾದನೆ
- ಬೆಂಗಳೂರಿನಲ್ಲಿ ನಾಳೆ 'ಸೇವಾ ಫಸ್ಟ್ ಇನ್ನೋವೇಷನ್ ಚಾಲೆಂಜ್'ಗೆ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಚಾಲನೆ
- ಏಷ್ಯನ್ ಗೇಮ್ಸ್: ಶೂಟಿಂಗ್, ಸ್ಕಲ್ಸ್ ವಿಭಾಗದಲ್ಲಿ ಭಾರತಕ್ಕೆ ಕಂಚು

<><><><>

ಬದಲಾಗುತ್ತಿರುವ ಯುದ್ಧದ ಸ್ವರೂಪಕ್ಕೆ ಅನುಗುಣವಾಗಿ ಭಾರತದ ರಕ್ಷಣಾ ವ್ಯವಸ್ಥೆ ತ್ವರಿತವಾಗಿ ಹೊಂದಿಕೊಳ್ಳುವ ಅಗತ್ಯವಿದೆ ಎಂದು ಭಾರತೀಯ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಎ.ಎಸ್.ರಾಜಸುಬ್ರಮಣಿ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಸಂವಾದವೊಂದರಲ್ಲಿ ಮಾತನಾಡಿದ ಅವರು, ರಕ್ಷಣಾ ಪರಿಸರ ವ್ಯವಸ್ಥೆ ಬಲಪಡಿಸುವಲ್ಲಿ ತಂತ್ರಜ್ಞಾನ, ದತ್ತಾಂಶ ಮತ್ತು ಉದ್ಯಮದ ಏಕೀಕರಣದ ಮಹತ್ವವನ್ನು ತಿಳಿಸಿದರು. ಸ್ಟಾರ್ಟ್‌ಅಪ್‌ಗಳು, ವಿಶ್ವವಿದ್ಯಾಲಯಗಳು, ಎಂಜಿನಿಯರ್‌ಗಳು, ವಿದ್ಯಾರ್ಥಿಗಳು ಮತ್ತು ತಂತ್ರಜ್ಞಾನ ಕಂಪನಿಗಳು ದೇಶದ ಸ್ವಾವಲಂಬನೆ ಮತ್ತು ರಕ್ಷಣಾ ಉತ್ಪಾದನೆಗೆ ಕೊಡುಗೆ ನೀಡಬಹುದು ಎಂದು ಜನರಲ್ ಎ.ಎಸ್.ರಾಜಸುಬ್ರಮಣಿ ಸಲಹೆ ನೀಡಿದರು.

<><><><>

ಭಾರತ ತನ್ನ ಒಟ್ಟು ಮೊಬೈಲ್ ಫೋನ್ ಬೇಡಿಕೆಯ ಸುಮಾರು ಶೇಕಡ ೯೯.೨ ರಷ್ಟನ್ನು ದೇಶೀಯವಾಗಿಯೇ ಉತ್ಪಾದಿಸುತ್ತಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಎಸ್.ಕೃಷ್ಣನ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ '೧೩ನೇ ವಾರ್ಷಿಕ ಪಬ್ಲಿಕ್ ಅಫೇರ್ಸ್ ಫೋರಂ ಆಫ್ ಇಂಡಿಯಾ-೨೦೨೬'ರ ಉದ್ಘಾಟನಾ ಅಧಿವೇಶನ ಉದ್ದೇಶಿಸಿ ಮಾತನಾಡಿದ ಅವರು, ಭಾರತ ವಾರ್ಷಿಕವಾಗಿ ಸುಮಾರು ೩೨ ರಿಂದ ೩೩ ಕೋಟಿ ಮೊಬೈಲ್ ಫೋನ್‌ಗಳನ್ನು ಉತ್ಪಾದಿಸುತ್ತಿದೆ ಎಂದು ಹೇಳಿದರು. ವಿಶ್ವದ ಐದು ಪ್ರಮುಖ ಮೊಬೈಲ್ ಫೋನ್ ಬ್ರಾಂಡ್‌ಗಳು ಭಾರತದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿಯೇ ತಮ್ಮ ಸಾಧನಗಳನ್ನು ಉತ್ಪಾದಿಸುತ್ತಿವೆ ಎಂದು ಅವರು ತಿಳಿಸಿದರು. ಉತ್ಪಾದನೆಯನ್ನು ಮತ್ತಷ್ಟು ಹೆಚ್ಚಿಸಲು, ದೇಶೀಯ ಮೌಲ್ಯವರ್ಧನೆಯನ್ನು ವೃದ್ಧಿಸಲು, ಪೂರೈಕೆ ಸರಪಳಿಯ

ಸ್ಥಿತಿಸ್ಥಾಪಕತ್ವವನ್ನು ಬಲಪಡಿಸಲು ಮತ್ತು ಜಾಗತಿಕ ಮಟ್ಟದಲ್ಲಿ ಭಾರತದ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಸರ್ಕಾರ ಮೊಬೈಲ್ ಫೋನ್ ಉತ್ಪಾದನಾ ಯೋಜನೆ'ಯನ್ನು ಜಾರಿಗೆ ತಂದಿದೆ ಎಂದು ಎಸ್.ಕೃಷ್ಣನ್ ಹೇಳಿದರು.

<><><>

ವೈದ್ಯಕೀಯ ವಿಜ್ಞಾನದ ರಾಷ್ಟ್ರೀಯ ಪರೀಕ್ಷಾ ಮಂಡಳಿ ಇಂದು ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ನೀಟ್-ಪಿಜಿ ೨೦೨೫ ರ ಫಲಿತಾಂಶ ಪ್ರಕಟಿಸಿದೆ. ೨೦೨೫-೨೬ನೇ ಸಾಲಿನ ಪ್ರವೇಶಾತಿಗೆ ಸಂಬಂಧಿಸಿದಂತೆ ವಿವಿಧ ಪಿಜಿ ಕೋರ್ಸ್‌ಗಳು ಮತ್ತು ಸ್ನಾತಕೋತ್ತರ ವೈದ್ಯಕೀಯ ಡಿಪ್ಲೊಮಾ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ದೇಶಾದ್ಯಂತ ಆಗಸ್ಟ್ ೩೦ ರಂದು ಈ ಪರೀಕ್ಷೆಯನ್ನು ನಡೆಸಲಾಗಿತ್ತು. ಒಟ್ಟು ೨ ಲಕ್ಷದ ೫೪ ಸಾವಿರದ ೯೫೦ ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಅಭ್ಯರ್ಥಿಗಳು ಅಕ್ಟೋಬರ್ ೧ ರಂದು ಅಥವಾ ಅದರ ನಂತರ ಅಧಿಕೃತ ವೆಬ್‌ಸೈಟ್‌ನಿಂದ ತಮ್ಮ ವೈಯಕ್ತಿಕ ಅಂಕಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು ಎಂದು ವೈದ್ಯಕೀಯ ವಿಜ್ಞಾನದ ರಾಷ್ಟ್ರೀಯ ಪರೀಕ್ಷಾ ಮಂಡಳಿ ತಿಳಿಸಿದೆ.

<><><>

ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ನಾಳೆ ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ - ಐಐಎಸ್‌ಸಿ ಯಲ್ಲಿ 'ಸೇವಾ ಫಸ್ಟ್ ಇನ್ನೋವೇಷನ್ ಚಾಲೆಂಜ್'ಗೆ ಚಾಲನೆ ನೀಡಲಿದ್ದಾರೆ. ಸಮುದಾಯಗಳಲ್ಲಿ ಕಂಡುಬರುವ ಸಮಸ್ಯೆಗಳನ್ನು ಗುರುತಿಸಲು ಮತ್ತು ಅವುಗಳಿಗೆ ಪರೀಕ್ಷಿಸಬಹುದಾದ, ಸುಧಾರಿಸಬಹುದಾದ ಹಾಗೂ ಅನುಷ್ಠಾನಕ್ಕೆ ತರಬಹುದಾದ ಪರಿಹಾರಗಳನ್ನು ಅಭಿವೃದ್ಧಿಪಡಿಸಲು, ಯುವಜನರನ್ನು ಪ್ರೋತ್ಸಾಹಿಸುವುದು ಈ ಉಪಕ್ರಮದ ಉದ್ದೇಶವಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವಾಲಯ ತಿಳಿಸಿದೆ. ಈ ಸ್ಪರ್ಧೆಯಲ್ಲಿ ಶಾಲೆಗಳು, ಕೈಗಾರಿಕಾ ತರಬೇತಿ ಸಂಸ್ಥೆಗಳು, ಪಾಲಿಟೆಕ್ನಿಕ್‌ಗಳು, ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಈ ಸ್ಪರ್ಧೆಯ ಅಂತಿಮ ಹಂತ ಡಿಸೆಂಬರ್‌ನಲ್ಲಿ ನವದೆಹಲಿಯಲ್ಲಿ ನಡೆಯಲಿದೆ. ಕೇಂದ್ರ ಶಿಕ್ಷಣ ಸಚಿವಾಲಯ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ ಮತ್ತು ವಿಶ್ವವಿದ್ಯಾಲಯ ಧನಸಹಾಯ ಆಯೋಗ ಜಂಟಿಯಾಗಿ ಈ ಸ್ಪರ್ಧೆಯನ್ನು ಆಯೋಜಿಸುತ್ತಿದೆ. ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯು ನೋಡಲ್ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ.

<><><>

ಜಾಗತಿಕ ಹವಾಮಾನ ಮತ್ತು ಇಂಧನ ನೀತಿಯ ಭವಿಷ್ಯ ರೂಪಿಸುವಲ್ಲಿ ಭಾರತ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಆಸ್ಟ್ರೇಲಿಯಾದ ಇಂಧನ ಮತ್ತು ಹವಾಮಾನ ಬದಲಾವಣೆ ಸಚಿವ ಕ್ರಿಸ್ ಬೋವೆನ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಪೂರ್ವ ಸಿಒಪಿ ಸಂವಾದ ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಶುದ್ಧ ಇಂಧನದ ತ್ವರಿತ ವಿಸ್ತರಣೆಯು ಆರ್ಥಿಕ ಸಮೃದ್ಧಿಯನ್ನು

ಬೆಂಬಲಿಸುತ್ತದೆ ಎಂದರು. ಇದೇ ನವೆಂಬರ್‌ನಲ್ಲಿ ಟರ್ಕಿಯಲ್ಲಿ ನಡೆಯಲಿರುವ ಸಿಒಪಿ-೩೧ ಶೃಂಗಸಭೆಯು ಒಳಗೊಳ್ಳುವಿಕೆ, ಪಾರದರ್ಶಕತೆ, ವಿದ್ಯುದ್ಧೀಕರಣ ಮತ್ತು ಹೂಡಿಕೆಯ ಖಚಿತತೆಯ ಮೇಲೆ ಕೇಂದ್ರೀಕರಿಸುತ್ತದೆ ಎಂದು ಕ್ರಿಸ್ ಬೋವೆನ್ ತಿಳಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ. 'ಜನ ಸೇವೆಯೇ ದೇಶ ಸೇವೆ' ಎಂಬ ಮಂತ್ರದಡಿ ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ ೨೦೪೭ರ ವೇಳೆಗೆ ವಿಕಸಿತ ಭಾರತ ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಭಾರತದ ಸೌರ ಕ್ರಾಂತಿ ಕುರಿತ ಒಂದು ನೋಟ ಇಲ್ಲಿದೆ. ಭಾರತದ ಸೌರಶಕ್ತಿ ಕ್ಷೇತ್ರದಲ್ಲಿ ಕ್ರಾಂತಿಯಾಗಿದ್ದು, ದೇಶದ ಒಟ್ಟು ಸ್ಥಾಪಿತ ಸೌರ ವಿದ್ಯುತ್ ಸಾಮರ್ಥ್ಯ ಹೊಸ ಮೈಲಿಗಲ್ಲು ತಲುಪಿದೆ. ೨೦೧೪ ರಲ್ಲಿ ಕೇವಲ ೨.೮ ಗಿಗಾವ್ಯಾಟ್‌ನಷ್ಟಿದ್ದ ಭಾರತದ ಸೌರ ವಿದ್ಯುತ್ ಉತ್ಪಾದನಾ ಸಾಮರ್ಥ್ಯ, ೨೦೨೬ರ ಜುಲೈ ವೇಳೆಗೆ ಬೃಹತ್ ಪ್ರಮಾಣದಲ್ಲಿ ಏರಿಕೆಯಾಗಿದ್ದು, ಸುಮಾರು ೧೬೫ ಗಿಗಾವ್ಯಾಟ್‌ಗೆ ತಲುಪಿದೆ. ಸರ್ಕಾರದ ಮಹತ್ವಾಕಾಂಕ್ಷಿ 'ಪ್ರಧಾನಮಂತ್ರಿ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆ'ಯಡಿ ೨೦೨೬ ರ ಆಗಸ್ಟ್ ವೇಳೆಗೆ ೫೧ ಲಕ್ಷಕ್ಕೂ ಹೆಚ್ಚು ಮನೆಗಳಿಗೆ ಸೌರ ಸಂಪರ್ಕ ಕಲ್ಪಿಸಲಾಗಿದ್ದು, ೧೪.೮ ಗಿಗಾವ್ಯಾಟ್ ಮೇಲ್ಛಾವಣಿ ಸೌರ ವಿದ್ಯುತ್ ಉತ್ಪಾದಿಸಲಾಗುತ್ತಿದೆ. ಇದರಿಂದಾಗಿ ಸುಮಾರು ೧೯ ಲಕ್ಷ ಕುಟುಂಬಗಳು ಶೂನ್ಯ ವಿದ್ಯುತ್ ಬಿಲ್ ಪಡೆಯುತ್ತಿವೆ. 'ಪಿಎಂ-ಕುಸುಮ್' ಯೋಜನೆಯ ಮೂಲಕ ರೈತರ ನೀರಾವರಿ ಪಂಪ್‌ಸೆಟ್‌ಗಳಿಗೆ ಸೌರಶಕ್ತಿ ಅಳವಡಿಸಿ ಡೀಸೆಲ್ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲಾಗುತ್ತಿದೆ. ಉತ್ಪಾದನೆ, ಅನುಸ್ಥಾಪನೆ ಹಾಗೂ ನಿರ್ವಹಣೆ ಸೇರಿದಂತೆ ಈ ಇಡೀ ಸೌರ ಶಕ್ತಿ ವ್ಯವಸ್ಥೆಯು ದೇಶದಲ್ಲಿ ಸುಮಾರು ೧೭ ಲಕ್ಷ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಮೂಲಕ ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ಬಲ ನೀಡಿದೆ.

<><><><>

ಪ್ರಧಾನಮಂತ್ರಿ ಸೂರ್ಯ ಘರ್ ಉಚಿತ ವಿದ್ಯುತ್ ಯೋಜನೆಯು ದೇಶಾದ್ಯಂತ ವಿದ್ಯುತ್ ಕ್ಷೇತ್ರದಲ್ಲಿ ಹೊಸ ಕ್ರಾಂತಿಯನ್ನುಂಟು ಮಾಡುತ್ತಿದ್ದು, ಗ್ರಾಹಕರಿಗೆ ಆರ್ಥಿಕ ಸುಧಾರಣೆ ಒದಗಿಸುತ್ತಿದೆ. ಯೋಜನೆಯಡಿ ತಮ್ಮ ಮನೆಗೆ ೧ ಲಕ್ಷದ ೫೦ ಸಾವಿರ ರೂಪಾಯಿ ವೆಚ್ಚದಲ್ಲಿ ಸೋಲಾರ್ ವ್ಯವಸ್ಥೆ ಅಳವಡಿಸಿಕೊಳ್ಳಲಾಗಿದೆ ಎಂದು ಹುಬ್ಬಳ್ಳಿಯ ನವನಗರದ ನಿವಾಸಿ ಹಾಗೂ ಯೋಜನೆಯ ಫಲಾನುಭವಿ ಸಂತೋಷ್ ಬೇದ್ರೆ ಆಕಾಶವಾಣಿಯೊಂದಿಗೆ ತಮ್ಮ ಅನುಭವ ಹಂಚಿಕೊಂಡಿದ್ದಾರೆ.

ಧ್ವನಿ : ಸಂತೋಷ್ ಬೇದ್ರೆ, ಫಲಾನುಭವಿ

<><><><>

ನವದೆಹಲಿಯಲ್ಲಿ ಅಕ್ಟೋಬರ್ ೧೨ ರಿಂದ ೧೪ ರವರೆಗೆ ಪ್ರತಿಷ್ಠಿತ 'ಬ್ರಿಕ್ಸ್ ರಂಗೋತ್ಸವ' ಆಯೋಜನೆಯಾಗಿದೆ ಎಂದು ಕೇಂದ್ರ ಸಂಸ್ಕೃತಿ ಸಚಿವಾಲಯದ ಕಾರ್ಯದರ್ಶಿ ವಿವೇಕ್ ಅಗರ್ವಾಲ್ ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ಸದಸ್ಯ ರಾಷ್ಟ್ರಗಳ ವೈವಿಧ್ಯಮಯ ರಂಗಭೂಮಿ ಪರಂಪರೆಯನ್ನು ಬಿಂಬಿಸುವುದು, ಮಾನವೀಯ ಅನುಭವಗಳನ್ನು ಹಂಚಿಕೊಳ್ಳುವುದು ಹಾಗೂ ಬ್ರಿಕ್ಸ್ ಒಕ್ಕೂಟದ ದೇಶಗಳ ಜನರ ನಡುವಿನ ಸಾಂಸ್ಕೃತಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಪ್ರತಿಷ್ಠಿತ ರಾಷ್ಟ್ರೀಯ ನಾಟ್ಯ ಶಾಲೆಯು ಈ ರಂಗೋತ್ಸವದ ಆತಿಥ್ಯವನ್ನು ವಹಿಸಲಿದೆ ಎಂದು ವಿವರಿಸಿದ್ದಾರೆ.

<><><><>

ಜಪಾನ್‌ನ ಐಚಿ ನಗೋಯಾದಲ್ಲಿ ನಡೆಯುತ್ತಿರುವ ೨೦೨೬ರ ಏಷ್ಯನ್ ಕ್ರೀಡಾಕೂಟದ ಪುರುಷರ ಡಬಲ್ ಸ್ಕಲ್ಸ್ ವಿಭಾಗದಲ್ಲಿ ಭಾರತದ ಸತ್ನಾಮ್ ಸಿಂಗ್ ಮತ್ತು ಸಲ್ಮಾನ್ ಜೋಡಿ ಕಂಚಿನ ಪದಕ ಗೆದ್ದಿದ್ದಾರೆ. ಪುರುಷರ ಡಬಲ್ಸ್ ಸ್ಕಲ್ಸ್ ವಿಭಾಗದಲ್ಲಿ ಭಾರತ ಗೆದ್ದ ಏಷ್ಯನ್ ಕ್ರೀಡಾಕೂಟದ ಮೊದಲ ಪದಕ ಇದಾಗಿದೆ. ಇದೇ ಸ್ಪರ್ಧೆಯಲ್ಲಿ ಚೀನಾ ಜೋಡಿ ಚಿನ್ನದ ಪದಕ ಹಾಗೂ ಉಜ್ಬೇಕಿಸ್ತಾನ ಸ್ಪರ್ಧಿಗಳು ಬೆಳ್ಳಿ ಪದಕ ತಮ್ಮದಾಗಿಸಿಕೊಂಡರು. ಇನ್ನೊಂದೆಡೆ, ಶೂಟಿಂಗ್‌ನ ಮಿಶ್ರ ಸ್ಕೀಟ್ ತಂಡ ಸ್ಪರ್ಧೆಯಲ್ಲಿ ಭಾರತದ ಅನಂತಜೀತ್ ಸಿಂಗ್ ಮತ್ತು ಪರಿನಾಜ್ ಧಲಿವಾಲ್ ಕಂಚಿನ ಪದಕ ವಿಜೇತರಾಗಿದ್ದಾರೆ. ಈ ವಿಭಾಗದಲ್ಲಿ ಭಾರತಕ್ಕೆ ಲಭಿಸಿದ ಏಷ್ಯನ್ ಕ್ರೀಡಾಕೂಟದ ಮೊದಲ ಪದಕ ಇದಾಗಿದೆ. ಪದಕ ವಿಜೇತರನ್ನು ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಅಭಿನಂದಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>